ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ57/23088/2021-22

ದಿನಾಂಕ 27 AUG 2021

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಅಧಿಕಾರಿಗಳ ನಿಯೋಜನೆ ಬಗ್ಗೆ.

ಉಲ್ಲೇಖ: 1. ನಿಗಮದ ಆದೇಶ ಸಂಖ್ಯೆ ಕವಿಪ್ರನಿನಿ/ಎಸ್‌ಎ3/1598/2006-07 ದಿನಾಂಕ 05.04.2014.

2. ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ರವರ ಅ.ಸ.ಪತ್ರ ಸಂಖ್ಯೆ: ಸಿಐ 99 ಸಿಎಸ್‌ಸಿ 2020 ದಿನಾಂಕ 28.06.2021.

--

ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಯು ರಾಜ್ಯಾದ್ಯಂತ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಿ ನಿವೇಶನ, ಮಳಿಗೆ, ಗೋದಾಮು ಇತ್ಯಾದಿ ಜೊತೆಗೆ ಮೂಲಸೌಲಭ್ಯ ಒದಗಿಸುತ್ತಿದ್ದು, ವಿವಿಧ ಹಂತದ ಕೆಲಸಗಳ ನಿರ್ವಹಣೆಗಾಗಿ, ಸರ್ಕಾರದ ಇಲಾಖೆಗಳಾದ ಲೋಕೋಪಯೋಗಿ ಇಲಾಖೆ, ಲ್ಯಾಂಡ್ ಆರ್ಮಿ, ಕವಿಪ್ರನಿನಿ, ಕೆಪಿಸಿಎಲ್, ಆರ್‌ಡಿಪಿಆರ್ ಇಲಾಖೆಗಳಿಂದ ಈ ಕೆಳಕಂಡ ಹುದ್ದೆಗಳಿಗೆ ಅಭಿಯಂತರರನ್ನು ನಿಯೋಜಿಸುವಂತೆ ಕೋರಿರುತ್ತಾರೆ.

1. **ಸಹಾಯಕ ಕಾರ್ಯಪಾಲಕ ಅಭಿಯಂತರರು(ಸಿವಿಲ್)-04,**
2. **ಸಹಾಯಕ ಕಾರ್ಯಪಾಲಕ ಅಭಿಯಂತರರು(ವಿದ್ಯುತ್)-01,**
3. **ಸಹಾಯಕ ಅಭಿಯಂತರರು(ಸಿವಿಲ್)-04**

ಆದ್ದರಿಂದ, ಉಲ್ಲೇಖ-1 ರ ನಿಗಮದ ನಿಯೋಜನಾ ಷರತ್ತು ಹಾಗೂ ನಿಬಂಧನೆಗಳಿಗೆ ಒಳಪಟ್ಟು ನಿಯೋಜನೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಆಸಕ್ತಿ ಹೊಂದಿರುವ ಅಧಿಕಾರಿಗಳು ಈ ಸುತ್ತೋಲೆಯ ದಿನಾಂಕದಿಂದ **ಏಳು ದಿನಗಳ ಒಳಗಾಗಿ** ತಮ್ಮ ಇಚ್ಛಿತಾ ಪತ್ರವನ್ನು ಸಮುಚಿತ ಮಾರ್ಗದ ಮುಖೇನ ಕವಿಪ್ರನಿನಿ ನಿಗಮ ಕಾರ್ಯಾಲಯಕ್ಕೆ ಸಲ್ಲಿಸಲು ಸೂಚಿಸಿದೆ.

ನಿರ್ದೇಶಕರು (ಆಡಳಿತ ಮತ್ತು ಮಾ.ಸಂ)
ಕವಿಪ್ರನಿನಿ

ಪ್ರತಿಗಳು:

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ವಿದ್ಯುತ್ ಸರಬರಾಜು ಕಂಪನಿಗಳು/ಪಿಸಿಕೆಎಲ್
2. ಎಲ್ಲಾ ಮುಖ್ಯ ಇಂಜಿನಿಯರ್ (ವಿದ್ಯುತ್), ಕವಿಪ್ರನಿನಿ/ ವಿದ್ಯುತ್ ಸರಬರಾಜು ಕಂಪನಿಗಳು
3. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿದ್ಯುತ್), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿದ್ಯುತ್) ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು
5. ಪ್ರತಿ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ kptcl.karnataka.gov.in-->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.